ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ವಸತಿ ಯೋಜನೆಗಳಲ್ಲಿ ವಸತಿ ಹೀನರಿಗೆ ವಸತಿ ಕಲ್ಪಿಸುವ ಬಗ್ಗೆ

ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

217 (259) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿವಿಧ ವಸತಿ ಯೋಜನೆಯಡಿಯಲ್ಲಿ ವಸತಿ ರಹಿತರಿಗೆ ಮನೆಗಳನ್ನು ಕಲ್ಪಿಸುವ ಕಾರ್ಯಕ್ರಮವು ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಈ ಯೋಜನೆ ಪೂರ್ಣಗೊಳಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;(ಸಂಪೂರ್ಣ ವಿವರ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಿಗೆ ಬಿಡುಗಡೆಯಾದ ಖರ್ಚಾದ ಹಾಗೂ ಬಾಕಿ ಉಳಿದ ಹಣ ಎಷ್ಟು ; (ಅಂಕಿ ಅಂಶಗಳ ಸಹಿತ ಮಾಹಿತಿ ನೀಡುವುದು)

(ಇ) ಫಲಾನುಭವಿಗಳಿಗೆ ಸರಿಯಾದ ಸಮಯಕ್ಕೆ ಬಿಲ್‌ಗಳು ಆಗದಿರುವುದರಿಂದ ಮನೆಗಳು ಅಪೂರ್ಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮನೆಗಳು ಅಪೂರ್ಣವಾಗಿ ಉಳಿದಿವೆ;

(ಈ) ಕೊಳಗೇರಿ ಅಭಿವೃದ್ದಿಗಾಗಿ ವಸತಿ ಇಲಾಖೆ ರೂಪಿಸಿರುವ ಸೂರು ಯೋಜನೆಯೂ ರಾಜ್ಯದ ಎಲ್ಲಾ ಕೊಳಗೇರಿಗಳಲ್ಲೂ ಅನುಷ್ಠಾನಗೊಂಡಿದೆಯೇ ಇದಕ್ಕೆ ಮೀಸಲಿಟ್ಟಿರುವ ಹಣ ಎಷ್ಟು? (ಅಂಕಿ ಅಂಶಗಳ ಸಹಿತ ಮಾಹಿತಿ ನೀಡುವುದು)